ಆಯವ್ಯಯದಲ್ಲಿ ನಿಗಧಿಪಡಿಸಲಾಗಿದ್ದು ಕೃಷಿ ಮತ್ತು ತೋಟಗಾರಿಕಾ ವಿಜ್ಞಾನಗಳ ಎರೆಡೂ ಕಾಯ್ದೆಗಳಿಗೆ ತಿದ್ದುಪಡಿ ಆದನಂತರ ಈ ನೂತನ ಕೃಷಿ ವಿಶ್ವವಿದ್ಯಾಲಯವು ಕಾನೂನು ಬದ್ಧವಾಗಿ ಅಸ್ತಿತ್ವಕ್ಕೆ ಬರುತ್ತದೆ.

ಹೊಸದಾಗಿ ಕಾಮಗಾರಿಗಳ ಯೋಜನೆ

1016 (646) ಶ್ರೀ ರುದ್ರೇಶಗೌಡ. ವೈ.ಎನ್. (ಬೇಲೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2011–12ನೇ ಸಾಲಿನ 5054 ಯೋಜನೆಯಡಿ ಈ ಸಾಲಿನಲ್ಲಿ ಹೊಸದಾಗಿ ಕಾಮಗಾರಿಗಳನ್ನು ತೆಗೆದುಕೊಳ್ಳುವ ಯೋಜನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕಾಮಗಾರಿಗಳನ್ನು ಹೊಸದಾಗಿ ತೆಗೆದುಕೊಳ್ಳುವ ಯೋಜನೆ ಇದ್ದರೆ ಇದುವರೆವಿಗೂ ಕ್ರಿಯಾ ಯೋಜನೆಯನ್ನು ಏಕೆ ತಯಾರಿಸಿರುವುದಿಲ್ಲ;

ಇ) ಆರ್ಥಿಕ ವರ್ಷಾಂತ್ಯಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸುವುದರಿಂದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸಾಧ್ಯವಿರುವುದಿಲ್ಲ ನಿಜವೇ;

ಈ) ಹಾಗಿದ್ದಲ್ಲಿ, ಯಾವಾಗ ಕ್ರಿಯಾ ಯೋಜನೆ ತಯಾರಿಸಲಾಗುವುದು (ವಿವರ ನೀಡುವುದು)?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) 2011–12ನೆ ಸಾಲಿನ ಲೆಕ್ಕ ಶೀರ್ಷಿಕೆ–5054 ಇತರೆ ರಸ್ತೆ ನಿರ್ಮಾಣ ಅಡಿಯಲ್ಲಿ ದಕ್ಷಿಣ ವಲಯ ಹಾಗೂ ಉತ್ತರವಲಯದ ಎಲ್ಲಾ ವಿಭಾಗಗಳಲ್ಲಿ ಹೊಸ ಕಾಮಗಾರಿಗಳನ್ನು ತೆಗೆದುಕೊಳ್ಳುವ ಉದ್ದೇಶದಿಂದ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ.

ಆ) ಈಗಾಗಲೇ ಕ್ರಿಯಾ ಯೋಜನೆಯನ್ನು ತಯಾರಿಸಿ ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆಯಲಾಗಿರುತ್ತದೆ.

ಇ) ಆರ್ಥಿಕ ಇಲಾಖೆಯಿಂದ 2011–12ನೇ ಸಾಲಿನ ಆಯವ್ಯಯದಲ್ಲಿ ಇಲಾಖೆಗೆ ಒದಗಿಸಲಾದ ಅನುದಾನದ ಕೊರತೆಯಿಂದಾಗಿ ಹೊಸ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಆರ್ಥಿಕ ವರ್ಷದ ಪ್ರಾರಂಭಿಕ ಹಂತದಲ್ಲಿ ಕೈಗೆತ್ತಿಕೊಂಡಿರುವುದಿಲ್ಲ. ಈಗ ಆರ್ಥಿಕ ಇಲಾಖೆಯಿಂದ

ಅನುದಾನ ಒದಗಿಸುವ ಸಹಮತಿ ದೊರೆತಿರುವುದರಿಂದ ಕ್ರಿಯಾಯೋಜನೆಯನ್ನು ತಯಾರಿಸಿ ಅನುಮೋದನೆ ಪಡೆಯಲಾಗಿದ್ದು ಸಧ್ಯದಲ್ಲಿಯೇ ಹೊಸ ಕಾಮಗಾರಿಗಳ ಅಪೆಂಡಿಕ್ಸ್–ಇಯನ್ನು ಹೊರಡಿಸ ಲಾಗುವುದು.

ಈ) ಈಗಾಗಲೇ 2011–12ನೇ ಸಾಲಿನ ಹೊಸ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು (ಅಪೆಂಡಿಕ್ಸ್–ಇ) ತಯಾರಿಸಲಾಗಿದ್ದು ಸಧ್ಯದಲ್ಲಿಯೇ ಹೊರಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಟ್ರಾಕ್ಟರ್ ಖರೀದಿಸುವ ರೈತರಿಗೆ ಸಬ್ಸಿಡಿ

1017 (647) ಶ್ರೀ ರುದ್ರೇಶ್‌ಗೌಡ ವೈ.ಎನ್. (ಬೇಲೂರು) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರದ ಕೃಷಿ ಇಲಾಖೆ ವತಿಯಿಂದ ಹೊಸದಾಗಿ ಟ್ರ್ಯಾಕ್ಟರ್ ಖರೀದಿಸಿದ ರೈತರಿಗೆ ಸಬ್ಸಿಡಿ ನೀಡುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳು ಈ ಹಿಂದೆ ಸದನದಲ್ಲಿ ಆಶ್ವಾಸನೆಯನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಯೋಜನೆಯಲ್ಲಿ ಎಷ್ಟು ರೈತರಿಗೆ ಟ್ರ್ಯಾಕ್ಟರ್ ಸಬ್ಸಿಡಿ ನೀಡಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು);

ಇ) ಆಶ್ವಾಸನೆಯಂತೆ ಸಬ್ಸಿಡಿ ನೀಡದಿದ್ದರೆ ರೈತರಿಗೆ ಮಾಡಿದ ಅನ್ಯಾಯವಲ್ಲವೇ;

ಈ) ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಉಮೇಶ್. ಕತ್ತಿ (ಕೃಷಿ ಸಚಿವರು) :

ಅ) ಹೌದು.

ಆ) ಟ್ರ್ಯಾಕ್ಟರ್‌ಗಳಿಗೆ ಸಹಾಯಧನವನ್ನು ನೀಡಿದಲ್ಲಿ, ಆಯವ್ಯಯದ ಹೆಚ್ಚಿನ ಅನುದಾನವನ್ನು ಈ ಒಂದೇ ಘಟಕಕ್ಕೆ ವಿನಿಯೋಗಿಸಬೇಕಾಗುತ್ತದೆಯೇ ಹೊರತು ಇತರೇ ಕೃಷಿ ಉಪಕರಣಗಳನ್ನು ಸಹಾಯಧನದಲ್ಲಿ ವಿತರಿಸಲು ಸಾಧ್ಯವಾಗುವುದಿಲ್ಲ ಎಂಬ ಕಾರಣಕ್ಕಾಗಿ ಟ್ರ್ಯಾಕ್ಟರ್‌ಗಳಿಗೆ ಸಹಾಯಧನ ನೀಡುವುದನ್ನು 2010–11ನೇ ಸಾಲಿನಲ್ಲಿ ಸ್ಥಗಿತಗೊಳಿಸಲಾಗಿರುತ್ತದೆ. 2011–12ನೇ ಸಾಲಿನಲ್ಲಿಯೂ ಸಹ ಟ್ರ್ಯಾಕ್ಟರ್‌ಗೆ ಸಹಾಯಧನ ನೀಡುವುದನ್ನು ಸ್ಥಗಿತಗೊಳಿಸಿರುವುದನ್ನು ಮುಂದುವರೆಸಲಾಗಿರುತ್ತದೆ.